O.S.No.*32/2018*
*PW-1*

ದಿನಾಂಕ :13.10.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಎಸ.ಎಸ.ಪಿ. ವಕೀಲರಿಂದ ಃ-

ದಾವಾ ಆಸ್ತಿಯು ಒಟ್ಟು ಎಷ್ಟು ಎಕರೆ ಇರುತ್ತದೆ ಎಂದರೇ ನನಗೆ ಗೊತ್ತಿಲ್ಲ. ದಾವಾ ಆಸ್ತಿಯು ಮೊದಲು ಹಣಮಂತರಾಯ ಗೌಡ ರವರ ಹೆಸರಿನಲ್ಲಿ ಇತ್ತು. ಸದರಿ ಹಣಮಂತರಾಯ ರವರ ತಂದೆಯ ಹೆಸರು ಶರಣಪ್ಪ ಎಂದು ಇರುತ್ತದೆ. ತಹಸೀಲ್ದಾರ ರವರಿಂದ ಪಡೆದ ವಂಶಾವಳಿ ಪ್ರಮಾಣ ಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದಿರಾ ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಹಣಮಂತರಾಯ ತಂದೆ ಶರಣಪ್ಪ ಇವರು ದಾವಾ ಆಸ್ತಿಯನ್ನು ಶರಣಪ್ಪ ತಂದೆ ಗಿರೆಪ್ಪ ರವರಿಂದ ಖರೀದಿಸಿರುತ್ತಾರೆ ಎಂದರೆ ಸರಿಯಲ್ಲ. ಹಣಮಂತರಾಯ ತಂದೆ ಶರಣಪ್ಪ ಇವರು ಯಾವ ಇಸ್ವಿಯಲ್ಲಿ ತೀರಿಕೊಂಡರು ಎಂದು ನನಗೆ ಗೊತ್ತಿಲ್ಲ. ಹಣಮಂತರಾಯ ರವರಿಗೆ ಎಷ್ಟು ಜನ ಮಕ್ಕಳು ಎಂದು ನನಗೆ ಗೊತ್ತಿಲ್ಲ. ಸದರಿ ದಾವೆಯು ಚಾಲ್ತಿಯಲ್ಲಿರುವಾಗ ಸುಳ್ಳು ದಾಖಲೆಗಳನ್ನು ಸೃಷ್ಟಿಸಿಕೊಂಡು ನನ್ನ ಹೆಸರನ್ನು ನಮೂದಿಸಿಕೊಂಡಿರುತ್ತೇನೆ ಎಂದರೆ ಸುಳ್ಳು.

ಹಣಮಂತರಾಯ ತಂದೆ ಶರಣಪ್ಪ ರವರಿಗೆ ನಾನು ಯಾವುದೇ ರೀತಿಯ ವಾರಸ್ಸುದಾರರು ಇರದೇ ಇದ್ದರು ಕೂಡಾ ಸುಳ್ಳು ದಾಖಲೆಗಳನ್ನು ಸೃಷ್ಟಿಸಿಕೊಂಡು ದಾವಾ ಆಸ್ತಿಯನ್ನು ನನ್ನ ಹೆಸರಿಗೆ ನಮೂದಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಪ್ರತಿವಾದಿಯರು ಮತ್ತು ಅವರ ಹಿರಿಯರು ಸುಮಾರು 60-70 ವರ್ಷಗಳಿಂದ ದಾವಾ ಆಸ್ತಿಯಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ. ಪ್ರತಿವಾದಿಯರಿಗೆ ತೊಂದರೆ ಕೊಡುವ ಉದ್ದೇಶದಿಂದ ಮತ್ತು ಅವರಿಂದ ಆದಷ್ಟುಹ ಣವನ್ನು ಪಡೆಯುವ ಉದ್ದೇಶದಿಂದ ಸುಳ್ಳು ದಾವೆಯನ್ನು ಹೂಡಿ ಸುಳ್ಳು ಸಾಕ್ಷಿ ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ-ಇಲ್ಲ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)
ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ